# ಯಲಹಂಕ ವ್ಯಾಪ್ತಿಯಲ್ಲಿ ಭಾರೀ ಮಳೆ

## ಎರಡು ತಾಸಿನಲ್ಲಿ ಕೊಡಿಗೆಹಳ್ಳಿಯಲ್ಲಿ 77 ಮಿಲಿ ಮೀಟರ್ ಮಳೆ ಸುರಿದು ದಾಖಲೆ
## ಹಲಗೆವಡೇರಹಳ್ಳಿಯಲ್ಲಿ ಮನೆಗೆ ನುಗ್ಗಿದ ನೀರು | 8 ಮರ ಧರೆಗೆ | ಜನರ ಪರದಾಟ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ನಗರದಲ್ಲಿ ಗುರುವಾರ ಸಂಜೆಯಿಂದ ಶುಕ್ರವಾರ ಬೆಳಗ್ಗೆ ವರೆಗೂ ಗುಡುಗು ಸಹಿತ ಸುರಿದ ಧಾರಾಕಾರ ಮಳೆ ಪರಿಣಾಮ ನಗರದ ಎಂಟು ಕಡೆಗಳಲ್ಲಿ ಮರ ಬಿದ್ದಿವೆ. ಯಲಹಂಕ ವಲಯದಲ್ಲಿ ಅತಿ ಹೆಚ್ಚು ಮಳೆ ಸುರಿದಿದೆ.

ಗುರುವಾರ ರಾತ್ರಿಯಿಂದ ಶುಕ್ರವಾರ ಬೆಳಗ್ಗೆ 8.30ರ ವೇಳೆಗೆ ನಗರದ ಎಚ್‌ಎಸ್‌ಆರ್ ಬಡಾವಣೆಯ ಆರ್‌ಟಿಒ ಕಚೇರಿ ಬಳಿ, ಕೆ.ಜಿ ಹಳ್ಳಿ 13ನೇ ಮುಖ್ಯರಸ್ತೆ, ಬಿಇಎಲ್ ಬಡಾವಣೆ 3 ಬ್ಲಾಕ್, ಎಂ.ಎಸ್.ಪಾಳ್ಯ ಮುಖ್ಯರಸ್ತೆ ಹತ್ತಿರ ಭರತನಗರ ಹಾಗೂ ಜಯನಗರ ಅಶೋಕ್ ಪಿಲ್ಲರ್ ಬಳಿ ತಲಾ ಒಂದು ಮರ ಸೇರಿದಂತೆ ಒಟ್ಟು ಎಂಟು ಮರ ಧರೆಗುರುಳಿವೆ. ದೂರಿನ ಮೇರೆಗೆ ಬಿಬಿಎಂಪಿ ಸಿಬ್ಬಂದಿ ಸ್ಥಳಕ್ಕೆ ಆಗಮಿಸಿ ಮರಗಳನ್ನು ತೆರವುಗೊಳಿಸಿದರು. ಆರ್.ಆರ್.ನಗರದ ಹಲಗೇವಡೆರಹಳ್ಳಿಯಲ್ಲಿ ಮನೆಗೆ ಮಳೆ ನೀರು ನುಗ್ಗಿ ಅವಾಂತರ ಸೃಷ್ಟಿಸಿತು. ಯಲಹಂಕದ ಕೊಡಿಗೇಹಳ್ಳಿಯಲ್ಲಿ ಅತೀ ಹೆಚ್ಚು 77 ಮಿ.ಮೀ ಮಳೆ ಬಿದ್ದಿದ್ದು, ಉಳಿದಂತೆ ಹೆಗ್ಗನಹಳ್ಳಿ 73.5, ಚೊಕ್ಕಸಂದ್ರ 70.5, ನಂದಿನಿ ಬಡಾವಣೆ ಹಾಗೂ ನಾಗಾಪುರದಲ್ಲಿ ತಲಾ 70, ಆರ್.ಆರ್.ನಗರ ಎಚ್‌ಎಂಟಿ ವಾರ್ಡ್ 68, ಹೆರೋಹಳ್ಳಿ 67.5, ಪೀಣ್ಯ ಕೈಗಾರಿಕಾ ಪ್ರದೇಶ 60, ಮನೋರಾಯನಪಾಳ್ಯ 59, ಮಾರಪ್ಪನಪಾಳ್ಯ 57, ವಿಶ್ವನಾಥ ನಾಗೇನಹಳ್ಳಿಯಲ್ಲಿ 52.5 ಮಿ.ಮೀ. ಮಳೆ ದಾಖಲಾಯಿತು.

**ತುಂತುರು ಮಳೆ:** ಶುಕ್ರವಾರ ಬೆಳಗ್ಗೆಯಿಂದ ಬಿಸಿಲಿನ ವಾತಾವರಣ ಕಂಡು ಬಂತು. ಸಂಜೆ ಹೊತ್ತಿಗೆ ಅಲ್ಲಲ್ಲಿ ತುಂತುರು ಮಳೆ ಸುರಿದಿದ್ದು, ಬಿಟ್ಟರೆ ಅಷ್ಟಾಗಿ ಮಳೆ ದಾಖಲಾಗಿಲ್ಲ.

ನಗರದ ಗರುಡಾಚಾರ್‌ಪಾಳ್ಯದಲ್ಲಿ 4 ಮಿ.ಮೀ, ಹೂಡಿ 3.5, ನಾಗಾಪುರ 3 ಮಿ.ಮೀ ಮಳೆ ಬಂದಿದೆ. ಉಳಿದಂತೆ ಹೊಯ್ಸಳ ನಗರ, ಸಂಪಿಗೆನಗರ, ಬೆನ್ನಿಗಾನಹಳ್ಳಿ ಸೇರಿದಂತೆ ಅಲ್ಲಲ್ಲಿ ತುಂತುರು ಮಳೆ ಬಂದಿದೆ. ನ. 7 ಹಾಗೂ 8 ರಂದು ಬೆಂಗಳೂರಿನಲ್ಲಿ ಬಿಸಿಲು ಸಹಿತ ಕೆಲವು ಕಡೆಗಳಲ್ಲಿ ತುಂತುರು ಮಳೆ ಮುಂದುವರಿಯುವ ಸಾಧ್ಯತೆ ಇದೆ ಎಂದು ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ (ಕೆಎಸ್‌ಎನ್‌ಡಿಎಂಸಿ) ಮುನ್ಸೂಚನೆ ನೀಡಿದೆ.